T·C-041

**017/DD/23**

| Register Number | | | | | | | | | |
|---|---|---|---|---|---|---|---|---|---|

# DEPARTMENTAL EXAMINATIONS

## TRANSLATION TEST – SECOND PAPER – TRANSLATION OF NEWS PAPER REPORT IN KANNADA TO ENGLISH

(Without Books)

Maximum Time : 2.30 hours | Maximum Marks : 100

**Answer ALL questions.**

1. Translate into English : (80)

ರಾಜ್ಯದ ಒಳನಾಡಿನಲ್ಲಿ ಮುಂಗಾರು ಪೂರ್ವ ಮಳೆ

ಕಳೆದ ಮೂರು ದಿನಗಳಿಂದ ರಾಜ್ಯದ ಒಳನಾಡಿನಲ್ಲಿ ಮುಂಗಾರು ಪೂರ್ವ ಮಳೆಯ ಆರ್ಭಟ ಜೋರಾಗಿದ್ದು, ಇನ್ನೂ ಮೂರು ದಿನಗಳು ಮಳೆ ಮುಂದುವರಿಯುವ ಮುನ್ಸೂಚನೆಗಳಿವೆ. ಭಾಗಶಃ ಮೋಡ ಕವಿದ ವಾತಾವರಣವಿದ್ದು, ಸಂಜೆ ಹಾಗೂ ರಾತ್ರಿ ವೇಳೆ ಒಳನಾಡಿನ ಹಲವು ಕಡೆಗಳಲ್ಲಿ ಮಳೆಯಾಗುವ ಸಾಧ್ಯತೆಗಳಿವೆ. ಹವಾಮಾನ ಮುನ್ಸೂಚನೆ ಪ್ರಕಾರ ರಾಜ್ಯದ ಒಳನಾಡಿನಲ್ಲಿ ಮೇ 25ರವರೆಗೂ ಮಳೆ ಮುಂದುವರೆಯುವ ಲಕ್ಷಣಗಳು ಗೋಚರಿಸುತ್ತಿವೆ ಎಂದು ಕರ್ನಾಟಕ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ಸಂಸ್ಥಾಪಕ ಹಾಗೂ ನಿವೃತ್ತ ವಿಶೇಷ ನಿರ್ದೇಶಕ ವಿ.ಎಸ್. ಪ್ರಕಾಶ್ ತಿಳಿಸಿದರು.

ಅರಬ್ಬಿ ಸಮುದ್ರದಲ್ಲಿ ಲಘು ವಾಯುಭಾರ ಕುಸಿತ ಉಂಟಾಗಿದೆ. ಅದರ ನೇರ ಪರಿಣಾಮ ಅಷ್ಟಾಗಿ ಕಂಡುಬರುತ್ತಿಲ್ಲ. ನೈಋತ್ಯ ಮುಂಗಾರು ಆರಂಭವಾಗುವ ಮುನ್ನ ಮಳೆಯು ಕೂಡ ಸಾಕಷ್ಟು ಪ್ರಮಾಣದಲ್ಲಿ ಆಗುತ್ತಿದೆ. ಒಣಹವೆ ಮುಂದುವರಿದಿರುವುದರಿಂದ ಆ ಭಾಗದಲ್ಲಿ ಗರಿಷ್ಠ ಉಷ್ಣಾಂಶ ಪ್ರಮಾಣ ಹೆಚ್ಚಾಗಿದೆ. ಆದರೆ ದಕ್ಷಿಣ ಒಳನಾಡಿನಲ್ಲಿ ಹಲವು ಕಡೆಗಳಲ್ಲಿ ಗುರುವಾರದವರೆಗೂ ಚದುರಿದಂತೆ ಮಳೆ ಬರುವ ಸಾಧ್ಯತೆಗಳಿವೆ ಎಂದು ಅವರು ಹೇಳಿದರು.

ಮೇ 25ರ ನಂತರ ಒಂದು ವಾರ ಕಾಲ ಮಳೆ ಬಿಡುವು ಕೊಡುವ ಸಾಧ್ಯತೆಗಳಿವೆ. ಮತ್ತೆ ಮುಂಗಾರು ಮಳೆ ಪ್ರಾರಂಭವಾಗಲಿದೆ. ವಾತಾವರಣದಲ್ಲಿ ತಾಪಮಾನ ಹೆಚ್ಚಾಗಿರುವ ಪರಿಣಾಮ ಸ್ಥಳೀಯವಾಗಿ ಮಿಂಚು, ಗುಡುಗಿನ ವಾತಾವರಣದಿಂದ ಕೂಡಿದ ಮಳೆಯಾಗುತ್ತಿದೆ. ಸಂಜೆ ಹಾಗೂ ರಾತ್ರಿ ವೇಳೆ ಬೆಂಗಳೂರು ಹಾಗೂ ಸುತ್ತಮುತ್ತಲ ಜಿಲ್ಲೆಗಳಲ್ಲಿ ಮಿಂಚು, ಗುಡುಗಿನಿಂದ ಕೂಡಿದ ಮಳೆಯಾಗುವ ಮುನ್ಸೂಚನೆಗಳಿವೆ ಎಂದು ಅವರು ತಿಳಿಸಿದರು. ಗಾಳಿ, ಆಲಿಕಲ್ಲು ಸಹಿತ ಮಳೆಯಾಗುವುದರಿಂದ ಮಾವು, ದ್ರಾಕ್ಷಿ ಸೇರಿದಂತೆ ವಿವಿಧ ಬೆಳೆಗಳಿಗೆ ಹಾನಿಯಾಗುವುದು ಸಹಜ. ಆದರೆ, ಮುಂಗಾರು ಹಂಗಾಮಿನಿನ ಬಿತ್ತನೆಗೆ ಭೂಮಿ ಹದ ಮಾಡಿಕೊಳ್ಳಲು ಮುಂಗಾರು ಪೂರ್ವಮಳೆ ಸಹಕಾರಿಯಾಗಲಿದೆ ಎಂದರು.

ಬಿರುಗಾಳಿ ಸಹಿತ ಮಳೆಗೆ ಹಲವು ಕಡೆಗಳಲ್ಲಿ ಮರ, ವಿದ್ಯುತ್ ಕಂಬಗಳು ಮುರಿದು ಬಿದ್ದಿವೆ. ಕೆಲವು ಕಡೆ ಮನೆಗಳ ಚಾವಣಿ ಗಾಳಿಗೆ ಹಾರಿಹೋಗಿರುವ ಬಗ್ಗೆಯೂ ವರದಿಯಾಗಿದೆ. ಬೆಂಗಳೂರಿನಲ್ಲಿ ಭಾನುವಾರ ಮಧ್ಯಾಹ್ನ ಬಿದ್ದ ಭಾರೀ ಮಳೆಗೆ ಮರಗಳು ಮುರಿದು ಬಿದ್ದಿದ್ದು, ರಸ್ತೆಗಳಲ್ಲಿ ನೀರು ತುಂಬಿ ಸಂಚಾರಕ್ಕೆ ಅಡಚಣೆ ಉಂಟಾಗಿತ್ತು. ನಿರಂತರವಾಗಿ ಬೀಳುತ್ತಿರುವ ಮಳೆಗೆ ವಾತಾವರಣ ತುಸು ತಂಪಾಗಿದೆ.

[Turn over

2. ಈ ಕೆಳಕಂಡ ಗಾದೆಗಳನ್ನು ಆಂಗ್ಲ ಭಾಷೆಗೆ ಭಾಷಾಂತರಿಸಿರಿ. (10 × 2 = 20)

(a) ಕಚ್ಚುವ ನಾಯಿ ಬೊಗಳುವುದಿಲ್ಲ.

(b) ಕುಂಬಾರನಿಗೆ ವರುಷ, ದೊಣ್ಣೆಗೆ ನಿಮಿಷ.

(c) ಹಸಿದು ಹಲಸು ತಿನ್ನು, ಉಂಡು ಮಾವು ತಿನ್ನು.

(d) ಅನ್ನ ಹಾಕಿದ ಮನೆಗೆ ಕನ್ನ ಹಾಕುವವನು.

(e) ಒಲ್ಲದ ಗಂಡನಿಗೆ ಮೊಸರಲ್ಲಿ ಕಲ್ಲು.

(f) ಆಳಾಗಿ ದುಡಿದು ಅರಸಾಗಿ ಉಣ್ಣು.

(g) ಅತ್ತೆಗೆ ಒಂದು ಕಾಲ, ಸೊಸೆಗೆ ಒಂದು ಕಾಲ.

(h) ಕೆಟ್ಟು ಪಟ್ಟಣ ಸೇರು.

(i) ವೇದ ಸುಳ್ಳಾದರೂ ಗಾದೆ ಸುಳ್ಳಾಗದು.

(j) ಹಿತ್ತಲ ಗಿಡ ಮದ್ದಲ್ಲ.

---